# ಸಾಮೂಹಿಕ ಕಲ್ಯಾಣ ಮಹೋತ್ಸವ

**ಚಿತ್ರದುರ್ಗ, ಫೆ. 5** - ಸತಿ-ಪತಿಗಳು ಸಹಕಾರ ಮನೋಭಾವದಿಂದ ಅನ್ಯೋನ್ಯತೆಯಿಂದ ಸಾಗಿದಾಗ ಬದುಕಿನಲ್ಲಿ ನೆಮ್ಮದಿ ಕಾಣಲು ಸಾಧ್ಯ ಎಂದು ಇಂಗಳೇಶ್ವರ ವಿರಕ್ತಮಠದ ಶ್ರೀ ಚನ್ನಬಸವ ಮಹಾಸ್ವಾಮಿಗಳು ತಿಳಿಸಿದರು.

ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠ ಮತ್ತು ಎಸ್.ಜೆ.ಎಂ. ಶಾಂತಿ ಮತ್ತು ಪ್ರಗತಿ ಫೌಂಡೇಶನ್ ಸಹಯೋಗದಲ್ಲಿ ನಡೆದ ಮೂವತ್ತೊಂದನೇ ವರ್ಷದ ಎರಡನೇ ತಿಂಗಳ ಸಾಮೂಹಿಕ ಕಲ್ಯಾಣ ಮಹೋತ್ಸವದಲ್ಲಿ ಭಾಗವಹಿಸಿ ಮಾತನಾಡಿದ ಶ್ರೀಗಳು, ಬಸವಾದಿ ಪ್ರಮಥರ ನಾಡಿನಲ್ಲಿ ಹುಟ್ಟಿರುವ ನಾವೆಲ್ಲ ಧನ್ಯರು. ಮುರುಘಾ ಶರಣರು ಇಂತಹ ಶ್ರೇಷ್ಠ ಕಾರ್ಯಗಳನ್ನು ಮಾಡುತ್ತಿರುವುದು ಪುಣ್ಯದ ಕೆಲಸ. ಶ್ರೀಗಳು 31ವರ್ಷಗಳಿಂದ ನಿರಂತರವಾಗಿ ಈ ಕಾರ್ಯಕ್ರಮವನ್ನು ನಡೆಸಿಕೊಂಡು ಬಂದಿರುವುದು ಸಾಮಾನ್ಯದ ಮಾತಲ್ಲ ಎಂದರು.

ಮುಖ್ಯಅತಿಥಿ ವಿಧಾನಸಭೆ ಉಪಾಧ್ಯಕ್ಷ ಆನಂದ ವಿ. ಮಾಮನಿ ಮಾತನಾಡಿ, ಸರಳ ಸಾಮೂಹಿಕ ಕಲ್ಯಾಣ ಮಹೋತ್ಸವದ ಹರಿಕಾರರು ಮುರುಘಾ ಶರಣರು. ನಮ್ಮ ಸರ್ಕಾರ ಮುರುಘರಾಜೇಂದ್ರ ವಿಶ್ವವಿದ್ಯಾನಿಲಯವನ್ನು ಮಂಜೂರು ಮಾಡಿದೆ. ಸಾಮೂಹಿಕ ಕಲ್ಯಾಣ ಮಹೋತ್ಸವ ಕಾರ್ಯಕ್ರಮ ಎಲ್ಲರಿಗೂ ಮಾದರಿಯಾಗಿದೆ. ಬಹಳ ದಿನಗಳಿಂದ ಈ ಪುಣ್ಯ ಕಾರ್ಯದಲ್ಲಿ ಪಾಲ್ಗೊಳ್ಳಬೇಕೆಂಬ ಆಸೆ ಇತ್ತು. ಅದು ಇಂದು ನೆರವೇರಿದೆ. ಶ್ರೀಗಳು ಶ್ರೀಮಠಕ್ಕೆ ಬಂದ ನಂತರ ಅನೇಕ ಅಭಿವೃದ್ಧಿ ಕಾರ್ಯಗಳನ್ನು ಮಾಡಿರುವುದನ್ನು ನಾವೆಲ್ಲ ನೋಡಿದ್ದೇವೆ, ಬಸವತತ್ವವನ್ನು ಶರಣರ ಆಶಯದಂತೆ ಮುಂದುವರೆಸಿಕೊಂಡು ಹೋಗುತ್ತಿರುವುದು ಸಂತಸವನ್ನುಂಟು ಮಾಡಿದೆ ಎಂದು ಹೇಳಿದರು.

ಬಯಲುಸೀಮೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಜೀವನಮೂರ್ತಿ ಮಾತನಾಡಿ, ಸರಳ ಸಾಮೂಹಿಕ ವಿವಾಹವು ಎಲ್ಲರಿಗೂ ಮಾದರಿಯಾಗಿದೆ. ದುಂದುವೆಚ್ಚಗಳನ್ನು ಮಾಡದೆ ಇಂತಹ ವಿವಾಹಗಳಲ್ಲಿ ಭಾಗವಹಿಸಿ ಆ ಹಣವನ್ನು ಯಾವುದಾದರೂ ಉದ್ಯೋಗ ಅಥವಾ ಜೀವನ ರೂಪಿಸಿಕೊಳ್ಳಲು ಬಳಸಿಕೊಳ್ಳಬಹುದು ಎಂದರು.

ಇದೇ ಸಂದರ್ಭದಲ್ಲಿ 14ಜೋಡಿಗಳು ವಿವಾಹವಾದರು. ಕೆಇಬಿ ಷಣ್ಮುಖಪ್ಪ, ಪೈಲ್ವಾನ್ ತಿಪ್ಪೇಸ್ವಾಮಿ ಮೊದಲಾದವರಿದ್ದರು.  ಜಮುರಾ ಕಲಾವಿದರು ಪ್ರಾರ್ಥಿಸಿದರು. ವೀರಭದ್ರಪ್ಪ ಸ್ವಾಗತಿಸಿದರು. ಜ್ಞಾನಮೂರ್ತಿ ನಿರೂಪಿಸಿದರು.


ಎರಡನೇ ತಿಂಗಳ
ಸಾಮೂಹಿಕ ಕಲ್ಯಾಣ ಮಹೋತ್ಸವ


ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠ,
ಎಸ್.ಜೆ.ಎಂ. ಶಾಂತಿ ಮತ್ತು ಪ್ರಗತಿ ಫೌಂಡೇಶನ್ (ರಿ.) ಚಿತ್ರದುರ್ಗ
ಮೂವತ್ತೊಂದನೇ ವರ್ಷ ಎರಡನೇ ತಿಂಗಳ
ಮೂಹಿಕ ಕಲ್ಯಾಣ ಮಹೋತ್ಸವ
02-2021 ಶುಕ್ರವಾರ


ಮೂವತ್ತೊಂದನೇ ವರ್ಷ ಎರಡನೇ ತಿಂಗಳ
ಸಾಮೂಹಿಕ ಕಲ್ಯಾಣ ಮಹೋತ್ಸವ
ದಿನಾಂಕ : 05-02-2021 ಶುಕ್ರವಾರ
ಸಮಯ : ಬೆಳಗ್ಗೆ 10.30
ಸ್ಥಳ : ಅನುಭವ ಮಂಟಪ


ಮೂವತ್ತೊಂದನೇ ವರ್ಷ ಎರಡನೇ ತಿಂಗಳ
ಸಾಮೂಹಿಕ ಕಲ್ಯಾಣ ಮಹೋತ್ಸವ